ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಆರನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 23ನೇ ಮಾರ್ಚ್, 2020

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿಮೂರನೇ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆ:-**

ದಿನಾಂಕ: 16.03.2020ರ 8ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಬಸವನಗೌಡ ದದ್ದಲ ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 117(998) : ಮಾನ್ಯ ಕಂದಾಯ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿಮೂರನೇ ಪಟ್ಟಿ

2. ವಿತ್ತೀಯ ಕಾರ್ಯಕಲಾಪಗಳು

1) 2020-21ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ

ಹಾಗೂ

1 ರಿಂದ 28 ರವರೆಗಿನ ಅನುದಾನ ಬೇಡಿಕೆಗಳ ಮೇಲೆ ಮುಂದುವರೆದ ಚರ್ಚೆ

2) 2019-20ನೇ ಸಾಲಿನ ಪೂರಕ ಅಂದಾಜುಗಳ (3ನೇ ಹಾಗೂ ಅಂತಿಮ ಕಂತು) ಮೇಲೆ ಮುಂದುವರೆದ ಚರ್ಚೆ.

... 2/ ..

3. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

1. ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) 2020ನೇ ಸಾಲಿನ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) 2020ನೇ ಸಾಲಿನ ಕರ್ನಾಟಕ ರೇಸ್ ಕೋರ್ಸುಗಳಿಗೆ ಪರವಾನಗಿ ನೀಡುವ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3. ಶ್ರೀ ಅರಬೈಲ್ ಹೆಬ್ಬಾರ್ ಶಿವರಾಮ್ (ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು) ಅವರು:–

ಅ) 2020ನೇ ಸಾಲಿನ ಕೈಗಾರಿಕಾ ವಿವಾದಗಳ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4. ಶ್ರೀ ಅರಬೈಲ್ ಹೆಬ್ಬಾರ್ ಶಿವರಾಮ್ (ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು) ಅವರು:–

ಅ) 2020ನೇ ಸಾಲಿನ ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಅವರು** – ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದ ವಿವಿಧ ಕಾಮಗಾರಿಗಳಿಗಾಗಿ ಮಂಜೂರು ಮಾಡಿದ್ದ ಅನುದಾನವನ್ನು ತಡೆಹಿಡಿದಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

... 3/ ..

2) **ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ ಅವರು** – ಸರ್ಕಾರದ ಹಂತದಲ್ಲಿ ಕಡತ ವಿಲೇವಾರಿಯಲ್ಲಿ ವಿಳಂಬವಾಗುತ್ತಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

3) **ಶ್ರೀ ಗಣೇಶ್ ಪ್ರಕಾಶ್ ಹುಕ್ಕೇರಿ ಅವರು** – ಬೆಳಗಾವಿ ಜಿಲ್ಲೆ ಚಿಕ್ಕೋಡಿ ತಾಲ್ಲೂಕಿನ ನೇಜ್ ಗ್ರಾಮಕ್ಕೆ ಸಮರ್ಪಕವಾಗಿ ವಿದ್ಯುತ್ ಪೂರೈಕೆ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

4) **ಶ್ರೀ ಅಭಯ ಪಾಟೀಲ ಅವರು** – ಬೆಳಗಾವಿ ದಕ್ಷಿಣ ಮತಕ್ಷೇತ್ರ ವ್ಯಾಪ್ತಿಯ ವಡಗಾವಿಯಲ್ಲಿ ಸರ್ಕಾರಿ ಪದವಿ ಕಾಲೇಜು ಆರಂಭಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ (ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ) ಗಮನ ಸೆಳೆಯುವುದು.

5) **ಶ್ರೀ ಕೆ.ವೈ. ನಂಜೇಗೌಡ ಅವರು** – ಕೋಲಾರ-ಚಿಕ್ಕಬಳ್ಳಾಪುರ ಜಿಲ್ಲಾ ಸಹಕಾರ ಹಾಲು ಒಕ್ಕೂಟದ ವತಿಯಿಂದ ನಿರ್ಮಿಸಲಾಗುತ್ತಿರುವ ಎಂ.ವಿ.ಕೆ. ಗೋಲ್ಡನ್ ಡೇರಿ ಕಾಮಗಾರಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

6) **ಶ್ರೀ ಎಂ.ಪಿ. ಕುಮಾರಸ್ವಾಮಿ ಅವರು** – ಮೂಡಿಗೆರೆ ತಾಲ್ಲೂಕು ಕಳಸಾ ಹೋಬಳಿ ಸಂಸೆ ಗ್ರಾಮದಲ್ಲಿ ರೈತರು ಕೃಷಿ ಮಾಡುತ್ತಿರುವ ಅರಣ್ಯ ಭೂಮಿಯನ್ನು ಕಂದಾಯ ಇಲಾಖೆಗೆ ಹಸ್ತಾಂತರಿಸಿ ರೈತರಿಗೆ ಶಾಶ್ವತ ಪರಿಹಾರವನ್ನು ನೀಡುವ ಬಗ್ಗೆ ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ ಗಮನ ಸೆಳೆಯುವುದು.

7) **ಶ್ರೀ ಕೃಷ್ಣ ಬೈರೇಗೌಡ ಅವರು** – 2019ನೇ ಸಾಲಿನ ಮುಂಗಾರು ಹಂಗಾಮಿನ ವಿಮಾ ಪರಿಹಾರ ಹಣವನ್ನು ನೋಂದಾಯಿತ ರೈತರಿಗೆ ನೀಡದಿರುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

8) **ಶ್ರೀ ಆನಂದ ಸಿದ್ದು ನ್ಯಾಮಗೌಡ ಅವರು** – ಜಮಖಂಡಿ ತಾಲ್ಲೂಕಿನ ಅಂಗನವಾಡಿ ಕೇಂದ್ರಗಳಿಗೆ ಕಳಪೆ ಗುಣಮಟ್ಟದ ಆಹಾರ ಸಾಮಗ್ರಿಗಳನ್ನು ವಿತರಣೆ ಮಾಡುತ್ತಿರುವ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

9) **ಶ್ರೀಯುತರುಗಳಾದ ಎ.ಟಿ. ರಾಮಸ್ವಾಮಿ, ಕೆ.ಎಂ. ಶಿವಲಿಂಗೇಗೌಡ ಮತ್ತು ಕೆ.ಎಸ್. ಲಿಂಗೇಶ್ ಅವರುಗಳು** – ಹಾಸನ ಜಿಲ್ಲೆಯ ವಿವಿಧ ಕಾಮಗಾರಿಗಳಿಗಾಗಿ ಅರ್ಹ ಗುತ್ತಿಗೆದಾರರುಗಳಿಂದ ಕರೆಯಲಾಗಿರುವ ಇ–ಪ್ರಕ್ಯೂರ್‌ಮೆಂಟ್ ಆನ್‌ಲೈನ್ ಟೆಂಡರ್‌ನ್ನು ರದ್ದುಗೊಳಿಸಿ ಮರು ಟೆಂಡರ್‌ನ್ನು ಕರೆಯುವ ಹಾಗೂ ಟೆಂಡರ್‌ನಲ್ಲಿ ಅಕ್ರಮವಾಗಿರುವ ಬಗ್ಗೆ ತನಿಖೆ ಮಾಡುವ ಕುರಿತು ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

10) **ಡಾ॥ ಭರತ್ ಶೆಟ್ಟಿ ವೈ ಅವರು** – ದಕ್ಷಿಣ ಕನ್ನಡ ಜಿಲ್ಲೆಯ ಸರ್ಕಾರಿ ಶಾಲೆಗಳ ಮೂಲಸೌಕರ್ಯ ಅಭಿವೃದ್ಧಿಗೆ ಕ್ಷೇತ್ರವಾರು ಅನುದಾನವನ್ನು ಬಿಡುಗಡೆ ಮಾಡಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

11) **ಶ್ರೀ ವಿ. ಮುನಿಯಪ್ಪ ಅವರು** – ಶಿಡ್ಲಘಟ್ಟ ನಗರ ಸಭೆ ವ್ಯಾಪ್ತಿಯ ನಗರೋತ್ಥಾನ ವಿಶೇಷ ಅನುದಾನದಡಿ ಮಂಜೂರಾಗಿದ್ದ ವಿವಿಧ ಕಾಮಗಾರಿಗಳ ಟೆಂಡರ್ ಪ್ರಕ್ರಿಯೆಯನ್ನು ತಡೆಹಿಡಿದಿರುವ ಬಗ್ಗೆ ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರ ಗಮನ ಸೆಳೆಯುವುದು.

12) **ಶ್ರೀ ಡಿ.ಸಿ. ತಮ್ಮಣ್ಣ ಅವರು** – ಮದ್ದೂರು ಪುರಸಭೆ ವ್ಯಾಪ್ತಿಯ ವಿವಿಧ ಕಾಮಗಾರಿಗಳಿಗೆ ಹಣ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

13) **ಶ್ರೀ ಹೆಚ್.ಕೆ. ಕುಮಾರಸ್ವಾಮಿ ಅವರು** – ಹಾಸನ ಜಿಲ್ಲೆಯ ಹೇಮಾವತಿ ಮತ್ತು ಯಗಚಿ ಜಲಾಶಯ ಯೋಜನೆ ಹಾಗೂ ಹಾಸನ ಮತ್ತು ಆಲೂರು ತಾಲ್ಲೂಕುಗಳಲ್ಲಿ ಭೂ ಸ್ವಾಧೀನ ಪಡಿಸಿಕೊಂಡಿರುವ ಜಮೀನಿನ ರೈತರಿಗೆ ಪರಿಹಾರ ನೀಡುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

14) **ಶ್ರೀ ಡಿ.ಸಿ. ಗೌರಿಶಂಕರ್ ಅವರು** – ತುಮಕೂರು ಗ್ರಾಮೀಣ ಪ್ರದೇಶಗಳಲ್ಲಿ ದಾಳಿ ನಡೆಸುತ್ತಿರುವ ಚಿರತೆಗಳನ್ನು ಕಂಡಲ್ಲಿ ಗುಂಡು ಹೊಡೆಯುವ ಮೂಲಕ ಕೊಲ್ಲುವ ಅಧಿಕಾರವನ್ನು ಅರಣ್ಯ ಇಲಾಖೆಗೆ ನೀಡುವ ಬಗ್ಗೆ ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ ಗಮನ ಸೆಳೆಯುವುದು.

15) **ಶ್ರೀ ಎಂ.ವೈ. ಪಾಟೀಲ ಅವರು** – ಅಫಜಲ್‌ಪೂರ ವಿಧಾನಸಭಾ ಕ್ಷೇತ್ರಕ್ಕೆ 2018–19ನೇ ಸಾಲಿನಲ್ಲಿ 3054 ರಲ್ಲಿ ಅನುದಾನ ಕಡಿತವಾಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

... 5/ ..

16) **ಶ್ರೀ ಟಿ. ರಘುಮೂರ್ತಿ ಅವರು** – ಚಿತ್ರದುರ್ಗ ಜಿಲ್ಲೆಯ ರೈತರಿಗೆ ಅನುಕೂಲವಾಗುವಂತೆ ಕಡಲೆಕಾಳು ಬೆಳೆಯನ್ನು ಖರೀದಿಸಲು ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

17) **ಶ್ರೀ ಸಂಜೀವ ಮಠಂದೂರು ಅವರು** – ಪುತ್ತೂರು ನಗರಸಭೆ ವ್ಯಾಪ್ತಿಯ ನಿವೇಶನ ರಹಿತರಿಗೆ ನಿವೇಶನ ಹಂಚಿಕೆ ಮಾಡುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

18) **ಶ್ರೀ ಪ್ರಿಯಾಂಕ ಖರ್ಗೆ ಅವರು** – ಕಲಬುರಗಿ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ನಡೆಯುತ್ತಿರುವ ಅಕ್ರಮ ಮರಳು ಗಣಿಗಾರಿಕೆ ಹಾಗೂ ಸಾಗಾಟವನ್ನು ತಡೆಯುವ ಬಗ್ಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರ ಗಮನ ಸೆಳೆಯುವುದು.

19) **ಶ್ರೀ ಮಸಾಲ ಜಯರಾಮ್ ಅವರು** - ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯಿತಿಗಳಿಗೆ ಜೀವವೈವಿಧ್ಯಗಳ ಯೋಜನೆಯ ವರದಿಯನ್ನು ನೀಡುವ ಸಲುವಾಗಿ ಸರ್ಕಾರಿ ಪ್ರೌಢಶಾಲೆಗಳ ಶಿಕ್ಷಕರುಗಳನ್ನು ನಿಯೋಜಿಸಿರುವುದರಿಂದ ವಿದ್ಯಾರ್ಥಿಗಳಿಗೆ ಆಗುತ್ತಿರುವ ತೊಂದರೆಗಳ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

20) **ಶ್ರೀ ಡಿ. ವೇದವ್ಯಾಸ ಕಾಮತ್ ಅವರು** – ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಕುಡಿಯವ ನೀರಿನ ಸಮಸ್ಯೆ ನಿವಾರಣೆಗೆ ತುಂಬೆ ಕಿಂಡಿ ಅಣೆಕಟ್ಟಿನಲ್ಲಿ ನೀರು ಸಂಗ್ರಹಣೆ ಮಾಡಿದಾಗ ಮುಳುಗಡೆಯಾಗುವ ಭೂಮಿಯ ಭೂಮಾಲೀಕರಿಗೆ ಭೂ ಪರಿಹಾರ ನೀಡುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

21) **ಶ್ರೀ ಅಶ್ವಿನ್ ಕುಮಾರ್ ಎಂ. ಅವರು** – ತಲಕಾಡು ಪಟ್ಟಣದಲ್ಲಿ 2020 ರಲ್ಲಿ ನಡೆಯಲಿರುವ ವಿಶ್ವಪ್ರಸಿದ್ಧ ಪಂಚಲಿಂಗೇಶ್ವರ ದರ್ಶನಕ್ಕಾಗಿ ಅಗತ್ಯ ರೂಪುರೇಷೆಗಳನ್ನು ಕೈಗೊಳ್ಳುವ ಬಗ್ಗೆ ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

22) **ಶ್ರೀ ದೇವಾನಂದ ಫೂಲಸಿಂಗ ಚವ್ಹಾಣ ಅವರು** – ವಿಜಯಪುರ ಜಿಲ್ಲೆಯ ಗ್ರಾಮೀಣ ಭಾಗದ ಶಿಕ್ಷಕರನ್ನು ಉದ್ದೇಶಪೂರ್ವಕವಾಗಿ ನಗರ ಪ್ರದೇಶಕ್ಕೆ ಸ್ಥಳ ನಿಯುಕ್ತಿಗೊಳಿಸುತ್ತಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

... 6/ ..

23) **ಶ್ರೀ ಆನಂದ ಸಿದ್ದು ನ್ಯಾಮಗೌಡ ಅವರು** – ಜಮಖಂಡಿ ತಾಲ್ಲೂಕಿನಲ್ಲಿ ಮರಳಿನ ಸಮಸ್ಯೆಯನ್ನು ಪರಿಹರಿಸಲು ಟೆಂಡರ್ ಕರೆಯುವ ಬಗ್ಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರ ಗಮನ ಸೆಳೆಯುವುದು.

24) **ಶ್ರೀ ಸಿದ್ದು ಸವದಿ ಅವರು** – ಸಸಾಲಟ್ಟಿ ಏತ ನೀರಾವರಿ ಯೋಜನೆಯನ್ನು ಕೈಬಿಡಲಾಗಿರುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

25) **ಶ್ರೀ ಶಿವಾನಂದ ಎಸ್. ಪಾಟೀಲ್ ಅವರು** – ವಿಜಯಪುರ ಜಿಲ್ಲೆಯಲ್ಲಿ ಸ್ಥಾಪಿತವಾಗಿರುವ ಕೂಡಗಿ ಉಷ್ಣ ವಿದ್ಯುತ್ ಸ್ಥಾವರದ ಯೋಜನಾ ನಿರಾಶ್ರಿತರ ಕುಟುಂಬಗಳ ಸದಸ್ಯರಿಗೆ ಉದ್ಯೋಗ ನೀಡುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಗಮನ ಸೆಳೆಯುವುದು.

26) **ಶ್ರೀ ಜೆ.ಎನ್. ಗಣೇಶ್ ಅವರು** – ಕಂಪ್ಲಿ ವಿಧಾನಸಭಾ ಕ್ಷೇತ್ರದ ವಿವಿಧ ಹಳ್ಳಿಗಳ ಕಾಮಗಾರಿಗಳಿಗೆ ಸ್ಥಳೀಯ ಶಾಸಕರಿಗೆ ಆಹ್ವಾನ ನೀಡದೇ ಶಿಷ್ಟಾಚಾರ ಉಲ್ಲಂಘನೆ ಮಾಡಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

27) **ಶ್ರೀ ಐಹೊಳೆ ದುರ್ಯೋಧನ ಮಹಾಲಿಂಗಪ್ಪ ಅವರು** – ಬೆಳಗಾವಿ ಜಿಲ್ಲೆ ರಾಯಭಾಗ ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಮೀನುಗಾರಿಕೆ ಕಛೇರಿಯ ನಿವೇಶನ ಹಾಗೂ ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯದ ನಿವೇಶನಗಳನ್ನು ಅಕ್ರಮವಾಗಿ ಕಬಳಿಸಿರುವ ಅತಿಕ್ರಮಣದಾರರಿಂದ ತೆರವುಗೊಳಿಸುವ ಹಾಗೂ ನಕಲಿ ದಾಖಲೆಗಳನ್ನು ಸೃಷ್ಟಿಸಿರುವ ಅಧಿಕಾರಿಗಳ ವಿರುದ್ಧ ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರ ಗಮನ ಸೆಳೆಯುವುದು.

28) **ಶ್ರೀ ಸಿ. ಪುಟ್ಟರಂಗಶೆಟ್ಟಿ ಅವರು** – ಚಾಮರಾಜನಗರದಲ್ಲಿ ಸರ್ಕಾರಿ ಕಾನೂನು ಕಾಲೇಜು ಕಾರ್ಯಾರಂಭ ಮಾಡದಿರುವ ಬಗ್ಗೆ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

29) **ಶ್ರೀ ಎಂ. ಕೃಷ್ಣಾರೆಡ್ಡಿ ಅವರು** – ಚಿಂತಾಮಣಿ ತಾಲ್ಲೂಕಿನ ಕಸಬಾ ಹೋಬಳಿಯಲ್ಲಿ ಸರ್ಕಾರಿ ಹುಲ್ಲು ಬನ್ನಿ ಖರಾಬು ಜಮೀನನ್ನು ಸರ್ಕಾರದ ವಶಕ್ಕೆ ಪಡೆಯುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

30) **ಶ್ರೀ ಹಾಲಪ್ಪ ಹರತಾಳ್ ಅವರು** – ಮಿನಿ ಅಂಗನವಾಡಿ ಕೇಂದ್ರಗಳನ್ನು ಮುಖ್ಯ ಅಂಗನವಾಡಿ ಕೇಂದ್ರಗಳನ್ನಾಗಿ ಪರಿವರ್ತಿಸುವ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

31) **ಶ್ರೀ ಲಾಲಾಜಿ ಆರ್. ಮೆಂಡನ್ ಅವರು** – ಕಾಪು ವಿಧಾನಸಭಾ ಕ್ಷೇತ್ರದಲ್ಲಿರುವ ಮೆಟ್ರಿಕ್‌ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಹಾಗೂ ವಲಸೆ ಬಂದಿರುವ ಕಾರ್ಮಿಕರ ಮಕ್ಕಳಿಗೆ ವಸತಿ ನಿಲಯಗಳ ಸೌಕರ್ಯ ಕಲ್ಪಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ) ಗಮನ ಸೆಳೆಯುವುದು.

32) **ಶ್ರೀ ಕೆ.ಎಂ. ಶಿವಲಿಂಗೇಗೌಡ ಅವರು** – ನಾಫೆಡ್ ಮುಖಾಂತರ ಬೆಂಬಲ ಬೆಲೆಯಲ್ಲಿ ರಾಗಿ ಖರೀದಿಸುತ್ತಿರುವುದರಲ್ಲಿ ಆಗುತ್ತಿರುವ ಅನ್ಯಾಯ ಹಾಗೂ ವಿಳಂಬದ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

33) **ಶ್ರೀ ಎಸ್.ಹೆಚ್. ಶಿವಶಂಕರ ರೆಡ್ಡಿ ಅವರು** – ದೊಡ್ಡಬಳ್ಳಾಪುರದ ಹತ್ತಿರದಲ್ಲಿರುವ ರೈ ತಾಂತ್ರಿಕ ಖಾಸಗಿ ಕೃಷಿ ವಿಶ್ವವಿದ್ಯಾಲಯದಲ್ಲಿ ಅನಧಿಕೃತವಾಗಿ ಕೋರ್ಸ್‌ಗಳನ್ನು ನಡೆಸುತ್ತಿದ್ದ ಬಗ್ಗೆ ತಂದಿರುವ ವಿಧೇಯಕವನ್ನು ಜಾರಿಗೊಳಿಸುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

34) **ಶ್ರೀಯುತರುಗಳಾದ ಹೆಚ್.ಕೆ. ಕುಮಾರಸ್ವಾಮಿ ಮತ್ತು ಕೆ.ಎಸ್. ಲಿಂಗೇಶ್ ಅವರುಗಳು** – ಹಾಸನ ತಾಲ್ಲೂಕಿನ ವಿವಿಧ ಗ್ರಾಮಗಳ ಜಮೀನುಗಳನ್ನು ಖಾಸಗಿ ಬಿಲ್ಡರ್ಸ್‌ಗಳು ಕಾನೂನುಬಾಹಿರವಾಗಿ ಬಡಾವಣೆಗಳನ್ನು ನಿರ್ಮಿಸಿರುವ ಹಾಗೂ ಕಡಿಮೆ ದರದಲ್ಲಿ ನಿವೇಶನಗಳನ್ನು ಮಾರಾಟ ಮಾಡಲಾಗುವುದೆಂದು ಸಾರ್ವಜನಿಕರಿಂದ ಹಣ ವಸೂಲಿ ಮಾಡುತ್ತಿರುವ ಪೊಲೀಸ್ ವೃತ್ತ ನಿರೀಕ್ಷಕರ ವಿರುದ್ಧ ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

35) **ಶ್ರೀ ವೆಂಕಟರಾವ್ ನಾಡಗೌಡ ಅವರು** – ಸಿಂಧನೂರು ಮತಕ್ಷೇತ್ರ ವ್ಯಾಪ್ತಿಯ ರೈತರು ಬೆಳೆದಿರುವ ರಬ್ಬೀ ಜೋಳವನ್ನು ಖರೀದಿಸುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

... 8/ ..

36) **ಶ್ರೀ ಸಿ.ಎನ್. ಬಾಲಕೃಷ್ಣ ಅವರು** – ಹಾಸನ ಜಿಲ್ಲೆಯ ಬೇಲೂರು ರಸ್ತೆ ಯರೇಹಳ್ಳಿ ಗ್ರಾಮ ಹಾಗೂ ಕಸಬಾ ಹೋಬಳಿಯ ಸುತ್ತಮುತ್ತಲಿನ ನೂರಾರು ಎಕರೆ ಜಮೀನುಗಳಲ್ಲಿ ಖಾಸಗಿ ಬಿಲ್ಡರ್ಸ್‌ಗಳು ಕಾನೂನುಬಾಹಿರವಾಗಿ ಬಡಾವಣೆಗಳನ್ನು ನಿರ್ಮಿಸಿರುವ ಬಗ್ಗೆ ಹಾಗೂ ಹಾಸನ ನಗರದ ಸುತ್ತಮುತ್ತ ನಡೆಯುತ್ತಿರುವ ಅಕ್ರಮ ಬಡಾವಣೆ ನಿರ್ಮಾಣಗಳ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

37) **ಶ್ರೀ ರಾಜಕುಮಾರ ಪಾಟೀಲ ತೇಲ್ಕೂರ ಅವರು** – ಸೇಡಂ ಮತಕ್ಷೇತ್ರದಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ಕೊರತೆಯಿಂದ ಸಾರ್ವಜನಿಕರು ಅನುಭವಿಸುತ್ತಿರುವ ತೊಂದರೆಗಳ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

38) **ಶ್ರೀ ಕೆ.ಆರ್. ರಮೇಶ್ ಕುಮಾರ್ ಅವರು** – ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಅಲೆಮಾರಿ ಕೋಶದಲ್ಲಿ ಐ.ಎಸ್.ಬಿ. ಯೋಜನೆಯಡಿಯಲ್ಲಿ ಆಯ್ಕೆಯಾದ ಫಲಾನುಭವಿಗಳಿಗೆ ಮನೆಗಳನ್ನು ನಿರ್ಮಿಸಿಕೊಡುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ) ಗಮನ ಸೆಳೆಯುವುದು.

39) **ಶ್ರೀ ಕೆ. ರಘುಪತಿ ಭಟ್ ಅವರು** – ಬ್ರಹ್ಮಾವರದಲ್ಲಿರುವ ಕೃಷಿ ವಿಜ್ಞಾನ ಕೇಂದ್ರದಲ್ಲಿ ಕೃಷಿ ಕಾಲೇಜನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

40) **ಶ್ರೀ ದೊಡ್ಡನಗೌಡ ಜಿ. ಪಾಟೀಲ ಅವರು** – ಅಸ್ತಿತ್ವದಲ್ಲಿ ಇಲ್ಲದೇ ಇರುವ ದಿ. ಬೆಂಗಳೂರು ಸಿಟಿ ಎಂಪ್ಲಾಯೀಸ್ ವೆಲ್‌ಫೇರ್ ಸಹಕಾರಿ ಸಂಘ ನಿಯಮಿತ ಇವರಿಗೆ ಬಿ.ಡಿ.ಎ. ವತಿಯಿಂದ ಅನಧಿಕೃತವಾಗಿ ಮಂಜೂರು ಮಾಡಿರುವ ನಿವೇಶನಗಳನ್ನು ಮುಟ್ಟುಗೋಲು ಹಾಕಿಕೊಳ್ಳುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)
